ದಿ:19–03–2018ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ** ಅರ್ಜಿದಾರರ ಪರ ಶ್ರೀ ಎಸ್ ಎ ವಕೀಲರಿಂದ

ನನ್ನ ಮುಖ್ಯ ವಿಚಾರಣೆಯ ಬಾಬ್ತು ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ನಾನು ಸಹಿ ಮಾಡಿರುತ್ತೇನೆ ಮತ್ತು ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ.

ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಶಾನೆ ಪಿ–1 ಎಂದು ಗುರುತಿಸಲಾಯಿತು. ಉತ್ತರ ಕ್ರಿಯ ಆಮಂತ್ರಣ ಪತ್ರಿಕೆಯನ್ನು ಹಾಜರು ಪಡಿಸಿರುತ್ತೇನೆ ಅದನ್ನು ನಿಶಾನೆ ಪಿ 2 ಎಂದು ಗುರುತಿಸಲಾಯಿತು. ಅರ್ ಟಿ ಸಿ ಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಶಾನೆ ಪಿ 3 ಎಂದು ಗುರುತಿಸಲಾಯಿತು. ಫೋಟೋವನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಶಾನೆ ಪಿ 4 ಎಂದು ಗುರುತಿಸಲಾಯಿತು. ಅಧಾರ್‌ಕಾರ್ಡ್‌ನ್ನು ಹಾಜರುಪಡಿಸಿರುತ್ತೇನೆ. ಅದನ್ನು ನಿಶಾನೆ ಪಿ 5 ಎಂದು ಗುರುತಿಸಲಾಯಿತು. ಎರಡು ಪತ್ರಿಕಾ ಪ್ರಕಟಣೆಯನ್ನು ಹಾಜರು ಪಡಿಸಿರುತ್ತೇನೆ. ಅದನ್ನು ನಿಶಾನೆ ಪಿ 6 ಮತ್ತು 7 ಎಂದು ಗುರುತಿಸಲಾಯಿತು. ಆದ್ದರಿಂದ ಅರ್ಜಿಯಲ್ಲಿ ಕೋರಿದಂತೆ ಆದೇಶಮಾಡಬೇಕಾಗಿ ಪ್ರಾರ್ಥನೆ.

**ಪಾಟಿ ಸವಾಲುಃ ಎದುರುದಾರರು ಏಕತರ್ಫಿಯಾಗಿರುವುದರಿಂದ ಪಾಟಿ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಗಿದೆ.**

ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಲಾಯ್ತು.

ಓದಿ ಹೇಳಿ ಕೇಳಲಾಗಿ ಸರಿ ಇದೆ ಎಂದು ಒಪ್ಪಿದರು.

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
(ಪ್ರಭಾರ)ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿ, ಉಡುಪಿ.